# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತಾರನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಸೋಮವಾರ, ದಿನಾಂಕ:18ನೇ ಆಗಸ್ಟ್, 2025**

**(ಸಮಯ: ಬೆಳಗ್ಗೆ: 10.00 ಗಂಟೆಗೆ)**

* * *

### 01. ಸಂತಾಪ ಸೂಚನೆ

### 02. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಐದನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಐದನೆಯ ಪಟ್ಟಿ

### 03. ಶೂನ್ಯವೇಳೆ ಪ್ರಸ್ತಾವಗಳು

### 04. ವರದಿಯನ್ನೊಪ್ಪಿಸುವುದು

**ಶ್ರೀ ಎಂ. ನಾಗರಾಜು (ಅಧ್ಯಕ್ಷರು, ಹಕ್ಕುಬಾಧ್ಯತಾ ಸಮಿತಿ)** ಅವರು ವಿಧಾನ ಪರಿಷತ್ತಿನ 2024-25ನೇ ಸಾಲಿನ ಹಕ್ಕುಬಾಧ್ಯತಾ ಸಮಿತಿಯ 104ನೇ ವರದಿಯನ್ನೊಪ್ಪಿಸುವುದು.

### 05. ಸಭೆಯ ಮುಂದಿಡಲಾಗುವ ಕಾಗದ ಪತ್ರ

**ಕಾರ್ಯದರ್ಶಿಯವರು:**

ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ **2025ನೇ ಸಾಲಿನ ಕರ್ನಾಟಕ ಸರಕು ಮತ್ತು ಸೇವೆಗಳ ತೆರಿಗೆ (ತಿದ್ದುಪಡಿ) ವಿಧೇಯಕವನ್ನು** ಸಭೆಯ ಮುಂದಿಡುವುದು.

## 06. ಶಾಸನ ರಚನೆ

**ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು**

01. ಕರ್ನಾಟಕ ಸರಕು ಮತ್ತು ಸೇವೆಗಳ ತೆರಿಗೆ (ತಿದ್ದುಪಡಿ) ವಿಧೇಯಕ, 2025
**ಶ್ರೀ ಸಿದ್ದರಾಮಯ್ಯ(ಮಾನ್ಯ ಮುಖ್ಯಮಂತ್ರಿಯವರು ಹಾಗೂ ಹಣಕಾಸು ಸಚಿವರು)**
ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2025ನೇ ಸಾಲಿನ "ಕರ್ನಾಟಕ ಸರಕು ಮತ್ತು ಸೇವೆಗಳ ತೆರಿಗೆ (ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

02. ಕರ್ನಾಟಕ ಭೂ ಸುಧಾರಣೆಗಳು ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕ, 2025
**ಶ್ರೀ ಕೃಷ್ಣ ಭೈರೇಗೌಡ(ಮಾನ್ಯ ಕಂದಾಯ ಸಚಿವರು)**
ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2025ನೇ ಸಾಲಿನ "ಕರ್ನಾಟಕ ಭೂ ಸುಧಾರಣೆಗಳು ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;
ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

## 07. ಗಮನ ಸೆಳೆಯುವ ಸೂಚನೆಗಳು

೦1. **ಶ್ರೀ ಸಿ.ಟಿ. ರವಿ** ಅವರು ಸರ್ಕಾರಿ ಶಾಲಾ ಕೊಠಡಿಗಳು ಶಿಥಿಲಾವಸ್ಥೆಯಲ್ಲಿರುವುದು ಹಾಗೂ ಕಲ್ಯಾಣ ಕರ್ನಾಟಕದ ಭಾಗದಲ್ಲಿ ಶಿಕ್ಷಕರ ಕೊರತೆಯಿಂದಾಗಿ ಕಲಿಕೆ ಮತ್ತು ಫಲಿತಾಂಶದಲ್ಲಿ ವ್ಯತಿರಿಕ್ತ ಪರಿಣಾಮಗಳು ಉಂಟಾಗಿರುವ ಕುರಿತು ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರ ಗಮನ ಸೆಳೆಯುವುದು.

೦2. **ಡಾ: ಎಂ.ಜಿ. ಮುಳೆ** ಅವರು ಆಯುಷ್ ಇಲಾಖೆಗೆ ಸಂಬಂಧಿಸದಿರುವ KASAPS ಸಂಸ್ಥೆಯ AIDS ರೋಗಿಗಳಿಗೆ ರೂ.10 ಕೋಟಿ ಮೌಲ್ಯದ ಔಷಧಿಗಳನ್ನು ರಾಷ್ಟ್ರೀಯ ಆಯುಷ್ ಮಿಷನ್ ಅಡಿಯಲ್ಲಿ 2023-24ನೇ ಸಾಲಿನಲ್ಲಿ ಖರೀದಿಸಿ, ಈವರೆಗೆ ಬಳಕೆ ಮಾಡದಿರುವ ಕುರಿತು ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

೦3. **ಶ್ರೀ ಎಂ. ನಾಗರಾಜು** ಅವರು ಬೆಳಗಾವಿ ವೈದ್ಯಕೀಯ ವಿಜ್ಞಾನ ಸಂಸ್ಥೆ ಆಸ್ಪತ್ರೆಯಲ್ಲಿ ನಿಯಮಿತವಾಗಿ ನವಜಾತ ಶಿಶುಗಳು ಮೃತಪಡುತ್ತಿರುವ ಕುರಿತು ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

೦4. **ಶ್ರೀ ಪುಟ್ಟಣ್ಣ ಹಾಗೂ ಶ್ರೀ ಎಸ್.ಎಲ್. ಭೋಜೇಗೌಡ** ಅವರುಗಳು ಕೋಲಾರ ತಾಲ್ಲೂಕು ರಾಷ್ಟ್ರೀಯ ಹೆದ್ದಾರಿ 75 ರಿಂದ ನರಸಾಪುರ ಗ್ರಾಮದ ಮೂಲಕ ಹಾದು ಹೋಗುವ ರಾಷ್ಟ್ರೀಯ ಹೆದ್ದಾರಿಯ ಹೆಚ್.ಎಲ್. ಸಂಖ್ಯೆ:345/2, 366 ಮತ್ತು ಇನ್ನಿತರೆ ನಿವೇಶನದಾರರ ಖಾತೆಗಳನ್ನು ರದ್ದುಗೊಳಿಸಿರುವ ಕುರಿತು ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಗಮನ ಸೆಳೆಯುವುದು.

೦5. **ಶ್ರೀ ಐವನ್ ಡಿ'ಸೋಜಾ** ಅವರು ಭಾರತ ಸಂವಿಧಾನದ ಅನುಚ್ಛೇದ 341(1)ರಂತೆ ಪರಿಶಿಷ್ಟ ಜಾತಿ ಪಟ್ಟಿಯಲ್ಲಿರುವ ಕುಡುಬಿ ಸಮುದಾಯದ ಹೆಸರು "ದಿ ಷೆಡ್ಯೂಲ್ಡ್ ಕ್ಯಾಸ್ಟಸ್ ಅಂಡ್ ಷೆಡ್ಯೂಲ್ಡ್ ಟ್ರೈಬ್ಸ್ ಲಿಸ್ಟ್ (ಮೊಡಿಫಿಕೇಷನ್) ಆರ್ಡರ್ 1956" ರಲ್ಲಿ ಬಿಟ್ಟುಹೋಗಿದ್ದು, ಕುಡುಬಿ ಜಾತಿಯ ಹೆಸರನ್ನು ಸೇರಿಸುವ ಬಗ್ಗೆ ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡಲು ಕ್ರಮಕೈಗೊಳ್ಳುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಸಚಿವರ ಗಮನ ಸೆಳೆಯುವುದು.

## 08. ನಿಯಮ 330ರ ಮೇರೆಗೆ

೦1. **ಶ್ರೀಯುತರುಗಳಾದ ಸಿ.ಟಿ. ರವಿ, ಎಸ್.ವ್ಹಿ. ಸಂಕನೂರ, ನಿರಾಣಿ ಹಣಮಂತ್ ರುದ್ರಪ್ಪ, ಎನ್. ರವಿಕುಮಾರ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು, ಛಲವಾದಿ ಟಿ. ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ನಾಯಕರು ಹಾಗೂ ಇತರರು** ರಾಜ್ಯದಲ್ಲಿ ಬಾಲಕಿಯರ ಮತ್ತು ಮಹಿಳೆಯರ ಮೇಲೆ ದೌರ್ಜನ್ಯ, ಕೊಲೆ, ಅತ್ಯಾಚಾರ, ಗಲಭೆ, ಸುಲಿಗೆ, ಡ್ರಗ್ಸ್ ಹಾಗೂ ಇನ್ನಿತರೆ ಅಪರಾಧ ಪ್ರಕರಣಗಳನ್ನು ತಡೆಯುವಲ್ಲಿ ಕಾನೂನು ಸುವ್ಯವಸ್ಥೆ ವಿಫಲವಾಗಿರುವ ಕುರಿತು ಪ್ರಸ್ತಾಪಿಸುವುದು. (ಮಾನ್ಯ ಗೃಹ ಸಚಿವರು)

೦2. **ಶ್ರೀಯುತರುಗಳಾದ ಛಲವಾದಿ ಟಿ. ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ನಾಯಕರು, ಎನ್. ರವಿಕುಮಾರ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು, ಮಾನ್ಯ ಶಾಸಕರುಗಳಾದ ಸಿ.ಟಿ. ರವಿ, ಸುನೀಲ್ ವಲ್ಯಾಪುರ್, ಎಸ್.ಎಲ್. ಭೋಜೇಗೌಡ ಹಾಗೂ ಇತರರು** ಪರಿಶಿಷ್ಠ ಜಾತಿ ಅಡಿಯಲ್ಲಿ ಬರುವ ವಿವಿಧ ಸಮುದಾಯಗಳಿಗೆ ಒಳಮೀಸಲಾತಿಯನ್ನು ಅನುಷ್ಠಾನಗೊಳಿಸುವ ಕುರಿತು ಪ್ರಸ್ತಾಪಿಸುವುದು. (ಮಾನ್ಯ ಸಮಾಜ ಕಲ್ಯಾಣ ಸಚಿವರು)

೦3. **ಶ್ರೀಯುತರುಗಳಾದ ರಾಮೋಜಿಗೌಡ, ಪುಟ್ಟಣ್ಣ ಹಾಗೂ ಡಿ.ಟಿ. ಶ್ರೀನಿವಾಸ್(ಡಿ.ಟಿ.ಎಸ್)** ಅವರುಗಳು ಕರ್ನಾಟಕದಲ್ಲಿ ಶೈಕ್ಷಣಿಕ ಗುಣಮಟ್ಟವನ್ನು ವೃದ್ಧಿಸುವ ಸಂಬಂಧ ಸರ್ಕಾರದಿಂದ ಶೈಕ್ಷಣಿಕ ಕಾನೂನುಗಳಿಗೆ ತಿದ್ದುಪಡಿ ತಂದು ಕಾರ್ಯಯೋಜನೆಗಳನ್ನು ಅನುಷ್ಠಾನಗೊಳಿಸುವ ಕುರಿತು ಪ್ರಸ್ತಾಪಿಸುವುದು. (ಮಾನ್ಯ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಸಚಿವರು)

೦4. **ಶ್ರೀಮತಿ ಹೇಮಲತಾ ನಾಯಕ್** ಅವರು ಕೊಪ್ಪಳ ನಗರದ ಸುತ್ತಮುತ್ತಲಿನ ಪರಿಸರ, ಜನ-ಜಾನುವಾರುಗಳ ಹಿತದೃಷ್ಠಿಯಿಂದ ಹೊಸ ಕಾರ್ಖಾನೆಗಳನ್ನು ತೆರೆಯಲು ಅನುಮತಿಸದಿರುವ ಕುರಿತು ಪ್ರಸ್ತಾಪಿಸುವುದು.(ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು)

೦5. **ಶ್ರೀ ಡಿ.ಎಸ್. ಅರುಣ್** ಅವರು ವಿಶೇಷಚೇತನ ಸರ್ಕಾರಿ ನೌಕರರಿಗೆ ವಾಹನ ಖರೀದಿಸಲು ಪ್ರಸ್ತುತ ನೀಡುತ್ತಿರುವ ಮೊತ್ತವನ್ನು ರೂ.30,000/- ರಿಂದ ರೂ.40,000/-ಗಳಿಗೆ ಹೆಚ್ಚಿಸುವ ಕುರಿತು ಪ್ರಸ್ತಾಪಿಸುವುದು.(ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು)

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**